ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 613(607)

ಸದಸ್ಯರ ಹೆಸರು : ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 13. 12. 2024.

ಉತ್ತರಿಸುವ ಸಚಿವರು : ಮಾನ್ಯ ಕೃಷಿ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| (ಅ) | ಕಲಬುರಗಿ ಜಿಲ್ಲೆಯಲ್ಲಿ ಬೆಳೆಯುತ್ತಿರುವ ತೊಗರಿಗೆ ಕೇಂದ್ರ ಸರ್ಕಾರ ಕೊಡಮಾಡಿದ ಜಿ-I ಟ್ಯಾಗ್ ಕ್ಲಾಸ್-31, 2017ನೇ ಸಾಲಿನಲ್ಲಿ ದೊರೆತಿದ್ದು, ಇಲ್ಲಿಯವರೆಗೂ ಅದರ ಗುಣ ಧರ್ಮಕ್ಕನುಗುಣವಾಗಿ ವೈಜ್ಞಾನಿಕ ಬೆಂಬಲ ಬೆಲೆ ನಿರ್ಧರಿಸಲು ಕೇಂದ್ರೀಯ ಕೃಷಿ ಉತ್ಪನ್ನ ಬೆಲೆ ನಿಗಧಿ ಆಯೋಗಕ್ಕೆ ಶಿಫಾರಸ್ಸು ಮಾಡಲು ರಾಜ್ಯ ಸರ್ಕಾರಕ್ಕೆ ಇರುವ ಅಡೆತಡೆಗಳೇನು; | ಕೇಂದ್ರ ಸರ್ಕಾರವು ಪ್ರತಿ ವರ್ಷ ಮುಂಗಾರು ಹಂಗಾಮಿನಲ್ಲಿ 14 ಬೆಳೆಗಳಿಗೆ ಮತ್ತು ಹಿಂಗಾರು ಹಂಗಾಮಿನಲ್ಲಿ 6 ಕೃಷಿ ಉತ್ಪನ್ನಗಳಿಗೆ ಬೆಂಬಲ ಬೆಲೆ ಘೋಷಣೆ ಮಾಡುತ್ತದೆ. ಇದಕ್ಕಾಗಿ ರಾಜ್ಯ ಸರ್ಕಾರದಿಂದ ಕೃಷಿ ಬೆಲೆ ಆಯೋಗದ ಉತ್ಪಾದನಾ ವೆಚ್ಚವನ್ನು ಆಧರಿಸಿ ಬೆಂಬಲ ಬೆಲೆ ಶಿಫಾರಸ್ಸು ಮಾಡಲಾಗುತ್ತದೆ.<br>ಕಲಬುರಗಿ ಜಿಲ್ಲೆಯಲ್ಲಿ ಬೆಳೆಯುತ್ತಿರುವ ಜಿ.ಐ. ಟ್ಯಾಗ್ (ಕ್ಲಾಸ್-31) ತೊಗರಿಗೆ ಹೆಚ್ಚಿನ ಬೆಂಬಲ ಬೆಲೆ ಘೋಷಣೆ ಮಾಡಲು ಕೇಂದ್ರದ ಕೃಷಿ ವೆಚ್ಚ ಮತ್ತು ಬೆಲೆ ಆಯೋಗವನ್ನು ಕೋರಲಾಗಿದೆ. |
| (ಆ) | ರಾಜ್ಯ ಬೆಲೆ ನಿಗಧಿ ಆಯೋಗದಿಂದ ಕೇಂದ್ರ ಬೆಲೆ ನಿಗಧಿ ಆಯೋಗಕ್ಕೆ ಬೆಂಬಲ ಬೆಲೆ ನಿರ್ಧರಿಸಲು ವರದಿಯನ್ನು ಸಲ್ಲಿಸಲು ಹಾಗೂ ತೊಗರಿಗೆ ಗುಣ ಧರ್ಮಕ್ಕನುಗುಣವಾಗಿ ಬೆಂಬಲ ಬೆಲೆ ಹೆಚ್ಚಿಸುವಂತೆ ಕೂಡಲೇ ಶಿಫಾರಸ್ಸು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ಸಂಪೂರ್ಣ ವಿವರ ನೀಡುವುದು) | ಕಲಬುರಗಿ ಜಿಲ್ಲೆಯಲ್ಲಿ ಬೆಳೆಯುತ್ತಿರುವ ಜಿ.ಐ. ಟ್ಯಾಗ್ (ಕ್ಲಾಸ್-31) ತೊಗರಿಗೆ ಹೆಚ್ಚಿನ ಬೆಂಬಲ ಬೆಲೆ ಘೋಷಣೆ ಮಾಡಲು ಕೇಂದ್ರದ ಕೃಷಿ ವೆಚ್ಚ ಮತ್ತು ಬೆಲೆ ಆಯೋಗವನ್ನು ಕೋರಲಾಗಿದೆ. |

ಸಂಖ್ಯೆ:AGRI/326/ACT/2024

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು